ಮಂಡ್ಯ ಜಿಲ್ಲಾ ಪೊಲೀಸ್

# ಪತ್ರಿಕಾ ಪ್ರಕಟಣೆ

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್ ಮತ್ತು ಡಿಎಆರ್) (ಪುರುಷ ಮತ್ತು ತೃತೀಯ ಲಿಂಗ ಪುರುಷ) 3064 ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ದಿನಾಂಕ: 28-01-2024 ರಂದು ಬೆಳಿಗ್ಗೆ 11.00 ರಿಂದ 12.30 ಗಂಟೆಯವರೆಗೆ ರಾಜ್ಯಾದ್ಯಂತ ನಡೆಸಲಾಗುವುದು. ಆದ್ದರಿಂದ ಸದರಿ ಲಿಖಿತ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪ್ರವೇಶ ಪತ್ರದಲ್ಲಿನ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಂಡು, ಮೂಲ ಗುರುತಿನ ಚೀಟಿಯೊಂದಿಗೆ ಕಡ್ಡಾಯವಾಗಿ ಈ ಕೆಳಕಂಡ ವಸ್ತ್ರ ಸಂಹಿತೆಯನ್ನು ಪಾಲಿಸಿ ಹಾಜರಾಗತಕ್ಕದ್ದು.

## ವಸ್ತ್ರ ಸಂಹಿತೆ:-

ಎ) ಪುರುಷ ಮತ್ತು ತೃತೀಯಲಿಂಗ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಶರ್ಟ್‌ಗಳನ್ನು ಕಡ್ಡಾಯವಾಗಿ ಧರಿಸುವುದು ಹಾಗೂ ಸಾಧ್ಯವಾದಷ್ಟು ಕಾಲರ್ ರಹಿತ ಶರ್ಟ್‌ಗಳನ್ನು ಧರಿಸುವುದು, ಜಿಪ್ ಪ್ಯಾಕೆಟ್‌ಗಳು, ದೊಡ್ಡ ಬಟನ್‌ಗಳು ಇರುವ ಶರ್ಟ್‌ಗಳನ್ನು ಧರಿಸತಕ್ಕದ್ದಲ್ಲ.

ಬಿ) ಜೀನ್ಸ್ ಪ್ಯಾಂಟ್ ಮತ್ತು ಹೆಚ್ಚಿನ ಜೇಬುಗಳಿರುವ ಪ್ಯಾಂಟ್‌ಗಳನ್ನು ಧರಿಸತಕ್ಕದ್ದಲ್ಲ.

ಸಿ) ಪರೀಕ್ಷಾ ಕೇಂದ್ರದೊಳಗೆ ಷೂಗಳನ್ನು ನಿಷೇಧಿಸಲಾಗಿದ್ದು, ಅಭ್ಯರ್ಥಿಗಳು ತೆಳುವಾದ ಅಡಿಭಾಗವಿರುವ ಪಾದರಕ್ಷೆಗಳನ್ನು (ಚಪ್ಪಲಿ) ಧರಿಸುವುದು.

ಡಿ) ಕುತ್ತಿಗೆ ಸುತ್ತಾ ಯಾವುದೇ ಲೋಹದ ಆಭರಣಗಳು ಅಥವಾ ಉಂಗುರ ಮತ್ತು ಕಡಗ ಗಳನ್ನು ಧರಿಸುವುದನ್ನು ನಿಷೇಧಿಸಲಾಗಿದೆ.

ಲಿಖಿತ ಪರೀಕ್ಷೆಗೆ ಹಾಜರಾಗುವ ಸಂಬಂಧ ಕರೆಪತ್ರಗಳನ್ನು ಪೊಲೀಸ್ ಇಲಾಖೆಯ ಅಧಿಕೃತ ವೆಬ್‌ಸೈಟ್ https://ksp.karnataka.gov.in ನಿಂದ ಪಡೆದುಕೊಳ್ಳಬಹುದಾಗಿರುತ್ತದೆ.

## ಅಭ್ಯರ್ಥಿಗಳಿಗೆ ವಿಶೇಷ ಸೂಚನೆ:-

ಕರ್ನಾಟಕ ರಾಜ್ಯದ ಪೊಲೀಸ್ ನೇಮಕಾತಿಯು ಪಾರದರ್ಶಕ, ಗಣಕೀಕೃತ, ಸಂಪೂರ್ಣ ವಸ್ತುನಿಷ್ಠ, ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ನಡೆಯುತ್ತದೆ. ಯಾವುದೇ ಅಭ್ಯರ್ಥಿಯು ಇಲಾಖೆಯ ಹೊರಗಾಗಲಿ ಅಥವಾ ಒಳಗಾಗಲೀ ಉದ್ಯೋಗ ಪಡೆಯುವ ಸಲುವಾಗಿ ಯಾವುದೇ ವ್ಯಕ್ತಿಗೆ ಹಣ ನೀಡುವುದು ಮಾಡಬಾರದು. ಈ ದಿಶೆಯಲ್ಲಿ ಮಧ್ಯವರ್ತಿಗಳ ಸುಳ್ಳು ಭರವಸೆಗಳಿಗೆ ಮಾರು ಹೋಗಬಾರದೆಂದು ಈ ಮೂಲಕ ಅಭ್ಯರ್ಥಿಗಳಿಗೆ ಎಚ್ಚರಿಕೆ ನೀಡಲಾಗಿದೆ.

ಸಹಿ/-
**ಪೊಲೀಸ್ ಅಧೀಕ್ಷಕರು,**
**ಮಂಡ್ಯ ಜಿಲ್ಲೆ.**